158 ಮು ಉ SL.NO:-04 09-03-2026

ಶ್ರೀ ಎಂ.ನಾಗರಾಜು, ಮಾನ್ಯ ಶಾಸಕರು - ಅಧ್ಯಕ್ಷರು, ಹಕ್ಕು ಭಾಧ್ಯತಾ ಸಮಿತಿ, ಕರ್ನಾಟಕ ವಿಧಾನ ಪರಿಷತ್ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ **ದಿನಾಂಕ:25/02/2026** ರಂದು **"ಬೆಳಗಾವಿ ಅಂಗನವಾಡಿ ಮಕ್ಕಳಿಗೆ expiry ಮಿಲೆಟ್ ಲಡ್ಡು"** ಎಂದು ಸಂಯುಕ್ತ ಕರ್ನಾಟಕ ದಿಪತ್ರಿಕೆಯಲ್ಲಿ ಸುದ್ದಿ ಪ್ರಕಟವಾಗಿರುತ್ತದೆ. **"ರಾಜ್ಯದ ಅಂಗನವಾಡಿ ಮಕ್ಕಳಿಗೆ ನೀಡಲಾಗುತ್ತಿರುವ ಪೌಷ್ಠಿಕ ಆಹಾರದಲ್ಲೇ ಭಾರಿ ಅಕ್ರಮ ಬೆಳಕಿಗೆ ಬಂದಿದೆ. ಮಕ್ಕಳಿಗೆ ನೀಡಲಾಗುತ್ತಿರುವ ಹಲವು ಆಹಾರ ಪದಾರ್ಥಗಳು ಮೂರರಿಂದ ಆರು ತಿಂಗಳ ಹಿಂದೆ ಅವಧಿ ಮೀರಿದ್ದರೂ ಇನ್ನೂ ವಿತರಿಸಲಾಗುತ್ತಿದೆ ಎಂದು ಸಮಾಜದ ಪರ ಹೋರಾಟಗಾರ್ತಿ ಆರೋಪಿಸಿದ್ದಾರೆ.**

**ಸಾಮಾಜಿಕ ಜಾಲತಾಣಗಳಲ್ಲಿ ಹರಡಿದ ವೀಡಿಯೋಗಳಲ್ಲಿ ಹುಳು ಬಿದ್ದ ರವಾ ಹಾಗೂ ಅಕ್ಟೋಬರ್-2025 ಅವಧಿ ತೋರಿಸುವ ಸಜ್ಜೆ ಲಡ್ಡು, ಸಾಂಬಾರ್ ಪುಡಿ ಮತ್ತು ಸಾಸಿವೆ ಕಾಳುಗಳ ಪ್ಯಾಕೆಟ್‌ಗಳು ಕಾಣಿಸುತ್ತಿವೆ ಎಂದು ಹೇಳಲಾಗಿದೆ. ಕೆಲ ಅಂಗನವಾಡಿ ಕಾರ್ಯಕರ್ತೆಯರಿಗೆ ಆಹಾರ ಸಾಮಗ್ರಿಗಳ ಅವಧಿ ಮೀರಿರುವುದು ಗೊತ್ತಿರಲಿಲ್ಲ ಎಂದು ಹೋರಾಟಗಾರ್ತಿ ಹೇಳಿದ್ದಾರೆ. ಮಕ್ಕಳಿಗೆ ವಿತರಿಸಲಾಗುತ್ತಿರುವ ಮಿಲೆಟ್ ಲಡ್ಡು (ಸಿರಿಧಾನ್ಯ ಲಡ್ಡು) ಪ್ಯಾಕೆಟ್‌ಗಳ ಅವಧಿ 2025 ರಲ್ಲೇ ಮುಗಿದಿರುವುದು ಪತ್ತೆಯಾಗಿದೆ. ಆದರೂ ಅದನ್ನೇ 2026ರಲ್ಲೂ ಮಕ್ಕಳಿಗೆ ನೀಡಲಾಗುತ್ತಿದೆ ಎಂಬುದು ಪೋಷಕರ ಆರೋಪ. ಪೌಷ್ಠಿಕ ಆಹಾರವೇ ಮಕ್ಕಳ ಶಾರೀರಿಕ ಹಾಗೂ ಬೌದ್ಧಿಕ ಬೆಳವಣಿಗೆಯ ಆಧಾರ, ಆದರೆ ಅವಧಿ ಮೀರಿದ ಆಹಾರ ಸೇವನೆಯಿಂದ ಅಜೀರ್ಣ, ವಾಂತಿ, ಜ್ವರ ಮುಂತಾದ ತೊಂದರೆಗಳು ಆಹಾರ ವಿಷಬಾಧೆ ಸಂಭವಿಸುವ ಸಾಧ್ಯತೆ ದೀರ್ಘಾವಧಿಯಲ್ಲಿ ಪೌಷ್ಠಿಕ ಕೊರತೆ ಎಂಬ ಆತಂಕವನ್ನು ವೈದ್ಯರು ವ್ಯಕ್ತಪಡಿಸಿದ್ದಾರೆ" ಎಂದು ದಿನಪತ್ರಿಕೆಯಲ್ಲಿ ಪ್ರಕಟವಾಗಿದ್ದು, ಪ್ರಯುಕ್ತ ಇಲಾಖಾ ಸಿಬ್ಬಂದಿ ಮತ್ತು ಅಂಗನವಾಡಿ ಕೇಂದ್ರಗಳ ಸಿಬ್ಬಂದಿ ನಿರ್ಲಕ್ಷ್ಯತೆ ವಿರುದ್ಧ ಕ್ರಮ ಕೈಗೊಳ್ಳುವ ಕುರಿತು"** ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ:

******

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿರುತ್ತದೆ. ಕರ್ನಾಟಕ ರಾಜ್ಯದಲ್ಲಿ, 2ನೇ ಅಕ್ಟೋಬರ್ 1975 ರಂದು ಪ್ರಾಯೋಗಿಕವಾಗಿ ಮೈಸೂರು ಜಿಲ್ಲೆಯ, ಟಿ. ನರಸೀಪುರ ತಾಲ್ಲೂಕಿನಲ್ಲಿ 100 ಅಂಗನವಾಡಿ ಕೇಂದ್ರಗಳೊಂದಿಗೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ಪ್ರಾರಂಭಿಸಲಾಯಿತು. ಈಗ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೂ ವಿಸ್ತರಿಸಲಾಗಿದೆ. 6 ವರ್ಷದ ಒಳಗಿನ ಮಕ್ಕಳ, ಗರ್ಭಿಣಿ, ಬಾಣಂತಿ ಮತ್ತು ಕಿಶೋರಿಯರ ಸರ್ವತೋಮುಖ ಅಭಿವೃದ್ಧಿಯು ಈ ಯೋಜನೆಯ ಮುಖ್ಯ ಗುರಿಯಾಗಿರುತ್ತದೆ.

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯನ್ನು ರಾಜ್ಯದ 204 ಯೋಜನೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, 69,922 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು 14 ಶಿಶು ಅಭಿವೃದ್ಧಿ ಯೋಜನೆಗಳಡಿ ಒಟ್ಟು 5656 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುತ್ತವೆ.

ಸಂಯುಕ್ತ ಕರ್ನಾಟಕ ದಿನಪತ್ರಿಕೆಯಲ್ಲಿ ಬೆಳಗಾವಿ ಅಂಗನವಾಡಿ ಮಕ್ಕಳಿಗೆ expiry ಮಿಲೆಟ್ ಲಡ್ಡು ಎಂಬ ವರದಿ ಪ್ರಕಟವಾದ ಹಿನ್ನೆಲೆಯಲ್ಲಿ, ಉಪ ನಿರ್ದೇಶಕರು ಹಾಗೂ ಜಿಲ್ಲಾ ನಿರೂಪಣಾಧಿಕಾರಿಗಳು, ಬೆಳಗಾವಿ ಇವರು ಬೆಳಗಾವಿ ಗ್ರಾಮೀಣ ಅಂಗನವಾಡಿ ಕೇಂದ್ರಗಳು ಹಾಗೂ ಸಂಬಂಧಪಟ್ಟ ಮಹಿಳಾ ಪೂರಕ ಪೌಷ್ಠಿಕ ಉತ್ಪಾದನಾ ಕೇಂದ್ರಕ್ಕೆ (ಎಂ.ಎಸ್.ಪಿ.ಸಿ.) ಭೇಟಿ ನೀಡಿ ಆಹಾರ ಸಾಮಗ್ರಿಗಳು ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ದಾಸ್ತಾನು ಇದ್ದ ಆಹಾರ ಪದಾರ್ಥಗಳನ್ನು ಪರಿಶೀಲಿಸಲಾಗಿ, ಗೋಧಿ ರವಾ, ಸಾಂಬಾರ್ ಪುಡಿ, ಸಿರಿಧಾನ್ಯ ಲಡ್ಡು ಹಾಗೂ ಇತರೆ ಯಾವುದೇ ಪದಾರ್ಥಗಳು ಅವಧಿ ಮೀರಿರುವುದು ಕಂಡು ಬಂದಿರುವುದಿಲ್ಲ ಎಂದು ವರದಿ ನೀಡಿರುತ್ತಾರೆ.

ಮುಂದುವರೆದು, ಪೂರಕ ಪೌಷ್ಟಿಕ ಆಹಾರವು ಸಕಾಲಕ್ಕೆ ಪೂರೈಕೆಯಾಗುತ್ತಿರುವುದನ್ನು ಮತ್ತು ಅಂಗನವಾಡಿ ಕೇಂದ್ರಗಳ ಫಲಾನುಭವಿಗಳಿಗೆ ವಿತರಣೆಯಾಗುತ್ತಿರುವುದನ್ನು ಖಚಿತಪಡಿಸಿಕೊಳ್ಳಲು ಹಾಗೂ ಪಾರದರ್ಶಕತೆ ಹೆಚ್ಚಿಸಲು ಕೇಂದ್ರ ಸರ್ಕಾರದ ಪೋಷಣ್ ಟ್ರ್ಯಾಕರ್ ತಂತ್ರಾಂಶದಲ್ಲಿನ ಫೇಸ್ ರೆಕಗ್ನಿಷನ್ ಸಿಸ್ಟಮ್ (FRS) ಮೂಲಕ ಆಹಾರ ಪದಾರ್ಥಗಳು ವಿತರಣೆಯಾಗುತ್ತಿರುವುದರಿಂದ ಅಂಗನವಾಡಿ ಕೇಂದ್ರಗಳಲ್ಲಿನ ಆಹಾರ ಪದಾರ್ಥಗಳ ದಾಸ್ತಾನಿನಲ್ಲಿ ಹೆಚ್ಚಿನ ಉಳಿಕೆ ಕಂಡುಬರುವುದಿಲ್ಲ.

ಪೂರಕ ಪೌಷ್ಟಿಕ ಆಹಾರ ಸರಬರಾಜು ಮತ್ತು ಗುಣಮಟ್ಟದ ಮೇಲ್ವಿಚಾರಣೆ ಮಾಡಲು ಜಿಲ್ಲಾ ಮಟ್ಟದಲ್ಲಿ ಮೇಲ್ವಿಚಾರಣಾ ಸಮಿತಿ ಹಾಗೂ ಪ್ರತಿ ಅಂಗನವಾಡಿಯ ಹಂತದಲ್ಲಿ ಬಾಲವಿಕಾಸ ಸಮಿತಿಯನ್ನು ರಚಿಸಲಾಗಿದ್ದು ಈ ಮೂಲಕವೂ ಸಹ ಮೇಲ್ವಿಚಾರಣೆ ಮಾಡಲಾಗುತ್ತಿದೆ.

ಇಲಾಖೆಯ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಅಂಗನವಾಡಿ ಕೇಂದ್ರಗಳ ಕುರಿತು ಕಟ್ಟುನಿಟ್ಟಿನ ಮೇಲ್ವಿಚಾರಣೆ ಮಾಡಲು ಹಾಗೂ ಜವಾಬ್ದಾರಿ ಕಾರ್ಯನಿರ್ವಹಣೆಯನ್ನು ಖಾತ್ರಿಪಡಿಸಿಕೊಳ್ಳಲು ಕಾಲಕಾಲಕ್ಕೆ ಸರ್ಕಾರದಿಂದ ಸೂಚನೆ ನೀಡಲಾಗಿರುತ್ತದೆ.

**ಸಂಖ್ಯೆ: ಮಮಇ 105 ಐಸಿಡಿ 2026**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು.